# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 420(421) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ವೈ.ಎಂ. ಸತೀಶ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 10.07.2023 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಅ) | ಕನ್ನಡ ವಿಶ್ವವಿದ್ಯಾಲಯದಲ್ಲಿ 2015-16 ಮತ್ತು 2016-17ನೇ ಸಾಲಿನಲ್ಲಿ ನಡೆದಿರುವ ಕಾಮಗಾರಿಗಳು ಮತ್ತು ಉಪಕರಣಗಳ ಖರೀದಿ ಪ್ರಕ್ರಿಯೆಯಲ್ಲಿ ಕೆಟಿಪಿಪಿ ಕಾಯ್ದೆಯನ್ನು ಉಲ್ಲಂಘಿಸಿ ಮತ್ತು ಇತರೆ ಕಾರಣಗಳಿಂದ ಸುಮಾರು ರೂ. 50.00 ಕೋಟಿಗಳ ಅವ್ಯವಹಾರ ನಡೆದಿರುವುದಾಗಿ ಲೋಕಾಯುಕ್ತ ತನಿಖಾ ವರದಿಯಲ್ಲಿ ಸಾಭೀತಾಗಿದ್ದು, ಈ ಬಗ್ಗೆ ಉನ್ನತ ಶಿಕ್ಷಣ ಇಲಾಖೆಯು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದರೂ ಸಹ ಇಲ್ಲಿಯವರೆಗೂ ಕ್ರಿಮಿನಲ್ ಪ್ರಕರಣವನ್ನು ದಾಖಲು ಮಾಡದಿರಲು ಕಾರಣವೇನು; | ಹಂಪಿಯ ಕನ್ನಡ ವಿಶ್ವವಿದ್ಯಾಲಯದಲ್ಲಿ 2015-16 ಮತ್ತು 2016-17ನೇ ಸಾಲಿನಲ್ಲಿ ನಡೆದಿರುವ ಆರ್ಥಿಕ ಅವ್ಯವಹಾರ/ದುರುಪಯೋಗಕ್ಕೆ ಸಂಬಂಧಪಟ್ಟಂತೆ, ಅಂದಿನ ಕುಲಪತಿಗಳು ಹಾಗೂ ಸಂಬಂಧಪಟ್ಟ ಇತರ ನಿವೃತ್ತ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಪೋಲೀಸ್ ಠಾಣೆಯಲ್ಲಿ ಕ್ರಿಮಿನಲ್ ದೂರು ದಾಖಲಿಸಲು ಕ್ರಮ ಕೈಗೊಳ್ಳುವಂತೆ ಹಾಗೂ ಸೇವೆಯಲ್ಲಿರುವ ನೌಕರರ ವಿರುದ್ಧವು ಸಹ ಪೋಲೀಸ್ ಠಾಣೆಯಲ್ಲಿ ಕ್ರಿಮಿನಲ್ ದೂರು ದಾಖಲಿಸಲು ಕ್ರಮ ಕೈಗೊಳ್ಳುವಂತೆ ವಿಶ್ವವಿದ್ಯಾಲಯದ ಕುಲಸಚಿವರಿಗೆ ಸೂಚನೆ ನೀಡಲಾಗಿತ್ತು. |
| (ಆ) | ಈ ಬಗ್ಗೆ ಪೊಲೀಸ್ ಪ್ರಕರಣ ದಾಖಲು ಮಾಡಲಾಗಿದೆಯೇ? (ಮಾಡಿದ್ದಲ್ಲಿ ಅದರ ಪೂರ್ಣ ವಿವರಗಳನ್ನು ನೀಡುವುದು? | ಮೇಲ್ಕಂಡ ನಿರ್ದೇಶನದ ಹೊರತಾಗಿಯೂ ಪ್ರಸ್ತಾಪಿತ ಪ್ರಕರಣದ ಸಂಬಂಧ ವಿಳಂಬ ಧೋರಣೆ ಅನುಸರಿಸಿದ ವಿಶ್ವವಿದ್ಯಾಲಯದ ಕುಲಸಚಿವರಿಗೆ ನೋಟೀಸನ್ನು ಜಾರಿಗೊಳಿಸಿ, ಅವರಿಂದ ಸಮಜಾಯಿಷಿ/ ವಿವರಣೆಯನ್ನು ಪಡೆಯಲಾಗಿದೆ. |

..2

| | | |
|---|---|---|
| | | ಮುಂದುವರೆದು, ಪೂರ್ವ ಪ್ರಸ್ತಾಪಿತ ಪ್ರಕರಣಕ್ಕೆ ಸಬಂಧಿಸಿದಂತೆ, ಸಂಬಂಧಪಟ್ಟ ಅಂದಿನ ಕುಲಪತಿಗಳು ಹಾಗೂ ಇತರ ನಿವೃತ್ತ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಮತ್ತು ಸೇವೆಯಲ್ಲಿರುವ ನೌಕರರ ವಿರುದ್ಧ ಪೋಲೀಸ್ ಠಾಣೆಯಲ್ಲಿ ಕ್ರಿಮಿನಲ್ ದೂರು ದಾಖಲಿಸಲು ಕೂಡಲೇ ಕ್ರಮ ಕೈಗೊಳ್ಳುವಂತೆ ಮತ್ತೊಮ್ಮೆ ಕುಲಸಚಿವರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಲಾಗಿದೆ. |

**ಸಂಖ್ಯೆ: ಇಡಿ/ 6 /ಕೆವಿವಿ /2023**

(ಡಾ|| ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಇಲಾಖೆ